ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಭವನ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಇಮೈಲ್: commissioner.pue@gmail.com ದೂರವಾಣಿ: 080-23561944. ಫ್ಯಾಕ್ಸ್: 23361852.

ಸಂಖ್ಯೆ: ಪಿಯುಇ/ಶೈಕ್ಷಣಿಕ-04/2016-17. ದಿನಾಂಕ: 19-09-2016.

## ಜ್ಞಾಪನ

ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 2016-17ನೇ ಶೈಕ್ಷಣಿಕ ಸಾಲಿಗೆ ದಾಖಲಾತಿ ಪಡೆದಿರುವ ಪ್ರಥಮ ಮತ್ತು ದ್ವಿತೀಯ ಪಿಯುಸಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿ ನೀಡುವ ಬಗ್ಗೆ ಕಾರ್ಯಕ್ರಮ ರೂಪಿಸಲು ಬೆಂಗಳೂರು ವಿಭಾಗ ಹಾಗೂ ಮೈಸೂರು ವಿಭಾಗ ಜಿಲ್ಲಾ ಉಪನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ, ರವರಗಳಿಗೆ ದಿನಾಂಕ: 20-09-2016ರಂದು ಬೆಳಗ್ಗೆ 11.00 ಗಂಟೆಗೆ ನಿರ್ದೇಶಕರ ಕಛೇರಿ, ಸಭಾಂಗಣ, ಪದವಿ ಪೂರ್ವ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಭವನ, 18ನೇ ಅಡ್ಡರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರ, ಬೆಂಗಳೂರು-560012 ರಲ್ಲಿ ಸಭೆಗೆ ಕರೆಯಲಾಗಿದೆ. ಸದರಿ ಸಭೆಗೆ ಬೆಂಗಳೂರು ವಿಭಾಗ ಹಾಗೂ ಮೈಸೂರು ವಿಭಾಗದ ಜಿಲ್ಲಾ ಉಪನಿರ್ದೇಶಕರುಗಳು ಖುದ್ದು ಹಾಜರಾಗಿ ಅಗತ್ಯ ಮಾಹಿತಿ ಹಾಗೂ ದಾಖಲೆಗಳನ್ನು ಒದಗಿಸುವುದು.

ಚರ್ಚಿಸುವ ವಿಷಯಗಳು:-

| ಕ್ರಮ ಸಂಖ್ಯೆ | ಅಜೆಂಡ |
|---|---|
| 1 | 2016-17 ನೇ ಸಾಲಿನ ಕನ್ನಡ ಮಾಧ್ಯಮ ಪ್ರಶಸ್ತಿ ಸಮಾರಂಭಕ್ಕೆ ಅವಶ್ಯವಿರುವ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ವಿವರಗಳನ್ನು ತುರ್ತಾಗಿ ನೀಡುವ ಬಗ್ಗೆ. |
| 2 | 2016-17 ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಶುಲ್ಕ ಮರುಪಾವತಿಗಾಗಿ ವಿದ್ಯಾರ್ಥಿಗಳ ಸಂಖ್ಯೆಯನ್ನು ನೀಡುವ ಕುರಿತು. |
| 3 | 2015-16ನೇ ಸಾಲಿನಲ್ಲಿ ಹೆಚ್ಚು ಅಂಕಪಡೆದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಬಿಡುಗಡೆ ಮಾಡಲಾದ ಅನುದಾನಕ್ಕೆ ಬಳಕೆ ಪ್ರಮಾಣ ಪತ್ರ |
| 4 | ಪ್ರತಿಭಾ ಶುಲ್ಕ ಉಚಿತ ಪುರಸ್ಕಾರಕಾಗಿ ವಿದ್ಯಾರ್ಥಿಗಳ ಮಾಹಿತಿ ಕುರಿತು. |
| 5 | ಕಿತ್ತೂರು ರಾಣಿ ಚನ್ನಮ್ಮ ಪುರಸ್ಕಾರಕಾಗಿ ವಿದ್ಯಾರ್ಥಿಗಳ ಮಾಹಿತಿ ಕುರಿತು |
| 6 | ಭಾಷಾ ವಿನಾಯಿತಿ ಪಡೆಯಲು ವಿದ್ಯಾರ್ಥಿಗಳ ಅರ್ಜಿಗಳು |
| 7 | ಖಾಸಗಿ ಭಾಷಾ ವಿಷಯ ಅಧ್ಯಯನಕ್ಕಾಗಿ ಅರ್ಜಿಗಳು |
| 8 | ಅಗತ್ಯವಿರುವ ಸಂಪನ್ಮೂಲ ವ್ಯಕ್ತಿಗಳ ವಿವರದ ಮಾಹಿತಿ (ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನೀಡುವ ತರಬೇತಿ ಕಾರ್ಯಕ್ರಮಕ್ಕೆ ಅಗತ್ಯವಿರುವ ಸರ್ಕಾರಿ ಹಾಗೂ ಖಾಸಗಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿರಿಯ ಉಪನ್ಯಾಸಕರ ಪಟ್ಟಿ). |
| 9 | ಪ್ರಥಮ ಮತ್ತು ದ್ವಿತೀಯ ಪಿಯುಸಿಗೆ ಸಂಬಂಧಿಸಿದಂತೆ **(Proforma –A)** |

ಮೇಲಿನ ಸಭೆಗೆ ಮೇಲಿನ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿದೆ.

(ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ)

ನಿರ್ದೇಶಕರ ಪರವಾಗಿ
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ: -

1. ಬೆಂಗಳೂರು ವಿಭಾಗ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ,
2. ಮೈಸೂರು ವಿಭಾಗ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ,